**Bangalore**
**Regional News**
**30.08.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಕೇಂದ್ರಸರ್ಕಾರದಿಂದ ಪರಿಸರ ತೀರುವಳಿ ದೊರೆತ ಕೂಡಲೇ ಮಹದಾಯಿ ಕಾಮಗಾರಿ ಆರಂಭ- ಮುಖ್ಯಮಂತ್ರಿ ಮಾಹಿತಿ**

**೨. ಜಿಲ್ಲೆಗಳಲ್ಲೂ ಉದ್ಯಮ ಸ್ಥಾಪಿಸುವಂತೆ ಖಾಸಗೀ ಉದ್ದಿಮೆದಾರರ ಮನ ಒಲಿಕೆಗೆ ಕ್ರಮ**

**೩. ಡೈರಿಗಳಿಗೆ ಹಾಲು ಪೂರೈಸುವ ದಿನದಂದೇ ರೈತರ ಬ್ಯಾಂಕ್ ಖಾತೆಗಳಿಗೆ ನೇರ ಹಣ ವರ್ಗಾವಣೆ**

**೪. ಬೆಂಗಳೂರು-ಮಧುರೈ 'ವಂದೇ ಭಾರತ್' ನೂತನ ರೈಲು ಸಂಚಾರ ನಾಳೆಯಿಂದ ಆರಂಭ**

**<><*<><>*><>**

ಮಹದಾಯಿ ಯೋಜನೆಗೆ ಕೇಂದ್ರ ಸರ್ಕಾರದಿಂದ ಪರಿಸರ ತೀರುವಳಿ ಬಿಡುಗಡೆಯಾದ ಕೂಡಲೇ ಕಾಮಗಾರಿ ಆರಂಭಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೬ನೇ ಹಣಕಾಸು ಆಯೋಗದ ಅಧಿಕಾರಿಗಳೊಂದಿಗೆ ನಿನ್ನೆ ಸಮಾಲೋಚನೆಯ ವೇಳೆ ತೆರಿಗೆ ಹಂಚಿಕೆ ಹಾಗೂ ವಿಶೇಷ ಅನುದಾನಗಳ ಬಗ್ಗೆ ರಾಜ್ಯದ ನಿಲುವನ್ನು ಸ್ಪಷ್ಟಪಡಿಸಲಾಗಿದೆ. ಹಿಂದಿನ ಹಣಕಾಸು ಆಯೋಗದಿಂದ ರಾಜ್ಯಕ್ಕೆ ಆಗಿರುವ ಅನುದಾನದ ಕೊರತೆಯನ್ನು ಪ್ರಸಕ್ತ ಆಯೋಗ ಸರಿದೂಗಿಸುವ ವಿಶ್ವಾಸವಿದೆ ಎಂದರು.

**<><*<><>*><>**

ಬೆಂಗಳೂರು ಹೊರತುಪಡಿಸಿ ರಾಜ್ಯದ ಇತರ ಜಿಲ್ಲೆಗಳಲ್ಲಿ ಕೈಗಾರಿಕಾ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡುತ್ತಿದ್ದು, ಖಾಸಗೀ ವಲಯದ ಉದ್ಯಮಿಗಳಿಗೆ ಈ ಬಗ್ಗೆ ಮನವರಿಕೆ ಮಾಡಲಾಗುತ್ತಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾನಾಡಿದ ಅವರು, ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಉದ್ಯಮಗಳ ಅಭಿವೃದ್ಧಿಯ ಬಗ್ಗೆ ಸರ್ಕಾರ ನಿರ್ಲಕ್ಷ್ಯ ಮಾಡುತ್ತಿಲ್ಲ ಎಂದರು. ಐಟಿಬಿಟಿ ಉದ್ಯಮದಾರರು ರಾಜಧಾನಿ ಬೆಂಗಳೂರು ಮತ್ತು ಸುತ್ತಮುತ್ತ ಮಾತ್ರ ತಮ್ಮ ಉದ್ಯಮಗಳ ಸ್ಥಾಪನೆ ಮಾಡಲು ಬಯಸುವುದು ಸಹಜವಾಗಿದೆ. ಆದರೆ, ಹಿಂದುಳಿದ ಜಿಲ್ಲೆಗಳಲ್ಲೂ ಕೈಗಾರಿಕಾ ಅಭಿವೃದ್ಧಿಗೆ ಗಮನಹರಿಸಲಾಗಿದೆ ಎಂದು ಅವರು ಹೇಳಿದರು. ಬೆಳಗಾವಿ ಹಾಗೂ ಹುಬ್ಬಳ್ಳಿ ನಡುವೆ ಒಂದು ನೂರು ಎಕರೆ ಪ್ರದೇಶದಲ್ಲಿ ನವೋದ್ಯಮಗಳ ಪಾರ್ಕ್, ಬೆಳಗಾವಿ-ಗೋವಾ ರಾಷ್ಟ್ರೀಯ ಹೆದ್ದಾರಿಯಲ್ಲಿ ಫೌಂಡ್ರಿ ಪಾರ್ಕ್ ಮತ್ತು ಬೆಳಗಾವಿ-ಹುಬ್ಬಳ್ಳಿ ನಡುವೆ ಕೈಗಾರಿಕಾ ಕಾರಿಡಾರ್ ನಿರ್ಮಾಣದ ಉದ್ದೇಶವಿದೆ ಎಂದು ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು.

**ಧ್ವನಿ: ಎಂ.ಬಿ.ಪಾಟೀಲ್**

**<><*<><>*><>**

ಸಶಸ್ತ್ರ ಪಡೆಗಳಲ್ಲಿ ಮಹಿಳಾ ಸಿಬ್ಬಂದಿಯ ಸಂಖ್ಯೆ ಗಣನೀಯ ಏರಿಕೆಯಾಗುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಕೇರಳದ ತಿರುವಂತಪುರಂನಲ್ಲಿಂದು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸ್ವಾತಂತ್ರ್ಯಾನಂತರ ಸೇನಾ ಪಡೆಗಳಲ್ಲಿ ಮಹಿಳೆಯರಿಗೆ ಹೆಚ್ಚು ಅವಕಾಶ ದೊರೆತಿರಲಿಲ್ಲ ಆದರೆ ಈಗ ಪರಿಸ್ಥಿತಿ ತೀವ್ರ ಬದಲಾಗಿದೆ ಎಂದರು. ಸಶಸ್ತ್ರ ಪಡೆಗಳಲ್ಲಿ ಮಹಿಳೆಯರ ಪ್ರವೇಶಕ್ಕಿದ್ದ ಅನೇಕ ಅಡೆತಡೆಗಳನ್ನು ನಿವಾರಿಸಲಾಗಿದ್ದು, ಸೈನಿಕ ಶಾಲೆಗಳಲ್ಲೂ ಸಹ ಹೆಣ್ಣುಮಕ್ಕಳಿಗೆ ಪ್ರವೇಶ ನೀಡಲಾಗುತ್ತಿದೆ ಎಂದು ಅವರು ಹೇಳಿದರು. ಭದ್ರತಾ ಪಡೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದರಷ್ಟು ಉದ್ಯೋಗಗಳನ್ನು ಕಲ್ಪಿಸುವಂತೆ ಎಲ್ಲ ರಾಜ್ಯಗಳಿಗೆ ಸಲಹೆ-ಸೂಚನೆಗಳನ್ನು ನೀಡಲಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

<><*<><>*><>

ಕ್ವೀರ್ ಸಮುದಾಯದವರು ಬ್ಯಾಂಕ್‌ಗಳಲ್ಲಿ ಜಂಟಿ ಖಾತೆ ತೆರೆಯಲು ಮತ್ತು ಕ್ವೀರ್ ಸಂಬಂಧದಲ್ಲಿನ ವ್ಯಕ್ತಿಯೊಬ್ಬರನ್ನು ನಾಮ ನಿರ್ದೇಶನ ಮಾಡಲು ಯಾವುದೇ ನಿರ್ಬಂಧಗಳಿಲ್ಲ ಎಂದು ಹಣಕಾಸು ಸಚಿವಾಲಯ ಸ್ಪಷ್ಟಪಡಿಸಿದೆ. ಈ ಸಂಬಂಧ ಹಣಕಾಸು ಸೇವೆಗಳ ಇಲಾಖೆ ನಿನ್ನೆ ಮಾರ್ಗಸೂಚಿ ಹೊರಡಿಸಿದೆ. ಬ್ಯಾಂಕ್ ಖಾತೆ ಹೊಂದಿದ ವ್ಯಕ್ತಿಯು ಮೃತಪಟ್ಟ ಸಂದರ್ಭಗಳಲ್ಲಿ ಖಾತೆಯಲ್ಲಿನ ಬಾಕಿ ಹಣವನ್ನು ನಾಮ ನಿರ್ದೇಶಿತ ವ್ಯಕ್ತಿ ಪಡೆಯಲು ಯಾವುದೇ ನಿರ್ಬಂಧವಿಲ್ಲ ಎಂದೂ ಸಹ ಸ್ಪಷ್ಟಪಡಿಸಲಾಗಿದೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಿಥಿಲಗೊಂಡಿರುವ ಸರ್ಕಾರಿ ಶಾಲಾ ಕಟ್ಟಡಗಳ ಪುನರ್ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಮಾತನಾಡಿದ ಅವರು, ಜಿಲ್ಲೆಯಲ್ಲಿ ಹಲವು ಶಾಲೆಗಳ ಕಟ್ಟಡಗಳು ದುರ್ಬಲಗೊಂಡಿರುವುದು ಗಮನಕ್ಕೆ ಬಂದಿದೆ. ಸರ್ಕಾರೇತರ ಸಂಸ್ಥೆಗಳು, ದಾನಿಗಳು, ಕಂಪನಿಗಳ ಸಿಎಸ್‌ಆರ್ ನಿಧಿ ಮತ್ತು ಕ್ರೌಡ್‌ಸೋರ್ಸಿಂಗ್ ಮೂಲಕ ಸಾರ್ವಜನಿಕ ಸಹಭಾಗಿತ್ವದ ಅಡಿಯಲ್ಲಿ ಶಾಲೆಗಳನ್ನು ಅಭಿವೃದ್ಧಿಪಡಿಸುವ ದತ್ತು ಯೋಜನೆಯನ್ನು ಸರ್ಕಾರ ರೂಪಿಸಲಿದೆ ಎಂದರು. ದಕ್ಷಿಣಕನ್ನಡ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮಕೈಗೊಳ್ಳಲಾಗುವುದು ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

<><*<><>*><>

ಹಾಲಿನ ಡೈರಿಗಳಲ್ಲಿ ನಡೆಯುವ ಅವ್ಯವಹಾರಗಳನ್ನು ತಡೆಗಟ್ಟಲು ರೈತರು ಡೈರಿಗಳಿಗೆ ಹಾಲು ಪೂರೈಸುವ ದಿನದಂದೇ ಅವರ ಬ್ಯಾಂಕ್ ಖಾತೆಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದು ಎಂದು ಸಹಕಾರಿ ಸಚಿವ ಕೆ.ಎನ್.ರಾಜಣ್ಣ ತಿಳಿಸಿದ್ದಾರೆ. ತುಮಕೂರು ಜಿಲ್ಲೆ ಯಡಿಯೂರಿನಲ್ಲಿ ಸಮಾರಂಭವೊಂದರಲ್ಲಿ ಮಾತನಾಡಿದ ಅವರು, ಸಹಕಾರ ಸಂಘಗಳಲ್ಲಿ ಸಾಲ ಪಡೆದು ಮೃತಪಟ್ಟಿರುವ ರೈತರ ಅಂದಾಜು ೪೨ ಕೋಟಿ ರೂಪಾಯಿ ಸಾಲದ ಹಣವನ್ನು ಮನ್ನಾ ಮಾಡಲಾಗಿದೆ. ಈ ಕ್ರಮದಲ್ಲಿ ಕರ್ನಾಟಕ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದರು. ಪೂರಕ ಕೃಷಿ ಚಟುವಟಿಕೆಯಾದ ಹೈನುಗಾರಿಕೆಗೆ ಆಧ್ಯತೆ ನೀಡುವುದ್ದರಿಂದ ರೈತರು ಆರ್ಥಿಕವಾಗಿ ಸಬಲರಾಗಬಹುದು ಎಂದು ಸಚಿವ ರಾಜಣ್ಣ ಹೇಳಿದರು.

<><*<><>*><>

ರಾಜ್ಯ ರಾಜಧಾನಿ ಬೆಂಗಳೂರು ಮತ್ತು ತಮಿಳುನಾಡಿನ  ದೇವಾಲಯಗಳ ನಗರ ಮಧುರೈ ನಡುವೆ ನಾಳೆಯಿಂದ ಅತ್ಯಾಧುನಿಕ ವಂದೇ ಭಾರತ್ ರೈಲು ಸಂಚಾರ ಆರಂಭವಾಗಲಿದೆ.  ಕೃಷ್ಣರಾಜಪುರಂ ಮತ್ತು ಬೆಂಗಳೂರು ಕಂಟೋನ್ಮೆಂಟ್ ರೈಲು ನಿಲ್ದಾಣಗಳಲ್ಲಿ ನಾಳೆ ವಂದೇ ಭಾರತ್ ಎಕ್ಸ್‌ಪ್ರೆಸ್ ಉದ್ಘಾಟನಾ ವಿಶೇಷ ರೈಲಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ವಿಡಿಯೋ ಲಿಂಕ್ ಮೂಲಕ ಹಸಿರು ನಿಶಾನೆ ತೋರಲಿದ್ದಾರೆ. ನಾಳೆ ಬೆಳಗ್ಗೆ ೭.೩೦ಕ್ಕೆ ಕೃಷ್ಣರಾಜಪುರಂ ರೈಲು ನಿಲ್ದಾಣ ಮತ್ತು ೮ ಗಂಟೆಗೆ ಬೆಂಗಳೂರು ಕಂಟೋನ್ಮೆಂಟ್ ರೈಲು ನಿಲ್ದಾಣಗಳಲ್ಲಿ ಹೊಸ ರೈಲುಗಳನ್ನು ಸ್ವಾಗತಿಸುವ ಕಾರ್ಯಕ್ರಮ ನಡೆಯಲಿದೆ. ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ್ ಭಾರತ್ ಯೋಜನೆಗಳಡಿ ದೇಶದಲ್ಲೇ ಈ ರೈಲುಗಳ ಕೋಚ್‌ಗಳನ್ನು ನಿರ್ಮಿಸಲಾಗಿದೆ. ಈ ರೈಲು ಪ್ರಯಾಣಿಕರಿಗೆ ವಿಶ್ವದರ್ಜೆಯ ಪ್ರಯಾಣದ ಅನುಭವವನ್ನು ನೀಡಲಿದೆ.

**<><*<><>*><>**

ಕೊಡಗು ಜಿಲ್ಲೆಯಲ್ಲಿ ಸತತ ಮಳೆಯಿಂದ ತೀವ್ರ ಕುಸಿತ ಕಂಡಿದ್ದ ಪ್ರವಾಸೋದ್ಯಮದ ಪುನಶ್ಚೇತನಕ್ಕೆ ಹಲವು ಕ್ರಮಗಳನ್ನು ಕೈಗೊಳ್ಳಲು ಸಿದ್ಧತೆಯಾಗುತ್ತಿದೆ. ಬರುವ ತಿಂಗಳ ಎರಡನೇ ವಾರದ ವೇಳೆಗೆ ಜಿಲ್ಲೆಯಲ್ಲಿ ಮಳೆ ಕಡಿಮೆಯಾಗುವ ಸಾಧ್ಯತೆ ಹಿನ್ನೆಲೆಯಲ್ಲಿ ವಿನೂತನ ಯೋಜನೆಗಳನ್ನು ಆರಂಭಿಸುವ ಉದ್ದೇಶವಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಅನಿತಾ ಭಾಸ್ಕರ್ ಮಾಹಿತಿ ನೀಡಿದ್ದಾರೆ.  ಈ ಕುರಿತು ನಮ್ಮ ಜಿಲ್ಲಾ ಪ್ರತಿನಿಧಿ ಎಚ್.ಟಿ.ಅನಿಲ್ ವಿವರಿಸಿದ್ದಾರೆ.

**ಧ್ವನಿ: ಎಚ್.ಟಿ.ಅನಿಲ್**

**<><*<><>*><>**

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಶಾಲಾ-ಕಾಲೇಜು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಗಾಂಜಾ ಮತ್ತಿತರ ಮಾದಕವಸ್ತು ಮಾರಾಟ ಜಾಲಗಳ ಮೇಲೆ ತೀವ್ರ ನಿಗಾ ಇಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಾದ್ಯಂತ ಗಾಂಜಾ ಮಾದಕವಸ್ತು ಮಾರಾಟ ಜಾಲ ಸಕ್ರಿಯವಾಗಿರುವ ದೂರುಗಳಿದ್ದು, ಯುವ ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಕರ್ಷಿತರಾಗುತ್ತಿರುವುದು ದುರದೃಷ್ಟಕರ. ಇದನ್ನು ನಿಯಂತ್ರಿಸಲು ಕಟ್ಟೆಚ್ಚರ ವಹಿಸುವಂತೆ ಪೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.

**<><*<><>*><>**

<u>ಇನ್ನು ಸಂಕ್ಷಿಪ್ತ ಸುದ್ದಿಗಳು...</u>

೧.	ಪ್ಯಾರಿಸ್ ಪ್ಯಾರಾಲಂಪಿಕ್ ಕ್ರೀಡಾಕೂಟದಲ್ಲಿ ಶೂಟಿಂಗ್ ವಿಭಾಗದಲ್ಲಿ ದೇಶದ 'ಅವನಿ ಲೇಖಾರ' ಚಿನ್ನದ ಪದಕ ಗೆದ್ದು ದಾಖಲೆ ನಿರ್ಮಿಸಿದ್ದಾರೆ. ಅವರು, ಅಂತಿಮ ಸುತ್ತಿನಲ್ಲಿ ೨೪೯.೭ ಅಂಕಗಳ ಮೂಲಕ ಸರ್ವಶ್ರೇಷ್ಠ ವಿಜೇತರಾಗಿ ಹೊರಹೊಮ್ಮಿದರು. ಇದೇ ವಿಭಾಗದಲ್ಲಿ ದೇಶದ 'ಮೋನಾ ಅಗರ್‌ವಾಲ್' ೨೨೮.೭ ಅಂಕಗಳೊಂದಿಗೆ ಕಂಚಿನ ಪದಕ ಗೆದ್ದುಕೊಂಡಿದ್ದಾರೆ.

೧. ಯಾದಗಿರಿ ಜಿಲ್ಲೆಯಲ್ಲಿ ಸೆಪ್ಟೆಂಬರ್ ೧೫ ರಂದು 'ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ' ನಿಮಿತ್ತ ೭೦ ಕಿಲೋಮೀಟರ್ ಉದ್ದದ ಮಾನವ ಸರಪಳಿ ನಿರ್ಮಿಸಲು ಉದ್ದೇಶಿಸಲಾಗಿದೆ. ಯರಗೋಳ ಗ್ರಾಮದಿಂದ ಗೂಗಲ್ ಸೇತುವೆವರೆಗೆ ೧೨ ಜನವಸತಿಗಳ ಮೂಲಕ ಮಾನವ ಸರಪಳಿ ಹಾದುಹೋಗಲಿದೆ ಎಂದು ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ.

೨. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕು ಜಾಲಿಗೆ ಗ್ರಾಮಪಂಚಾಯಿತಿಗೆ ಕೇಂದ್ರ ಸರ್ಕಾರ ಹಣಕಾಸು ಆಯೋಗದ ನಿಯೋಗ ಇಂದು ಭೇಟಿ ನಿಡಿ, ಗ್ರಾಮಪಂಚಾಯಿತಿ ಮಟ್ಟದಲ್ಲಿನ ವಿವಿಧ ಘಟಕಗಳನ್ನು ವೀಕ್ಷಿಸಿ ಮಾಹಿತಿ ಪಡೆಯಿತು. ಜಾಲಿಗೆ ಗ್ರಾಮಪಂಚಾಯಿತಿಯ ವರಮಾನ, ಪಂಚತಂತ್ರ ಪೋರ್ಟಲ್ ಕಾರ್ಯ ವಿಧಾನದ ಬಗ್ಗೆ ಪಂಚಾಯಿತಿಯ ಅಧಿಕಾರಿಗಳು ನಿಯೋಗಕ್ಕೆ ಮಾಹಿತಿ ನೀಡಿದರು.

**<><*<><>*><>**

<u>ಇನ್ನು ಹವಾವರ್ತಮಾನ...</u>

ಕರಾವಳಿ ಮತ್ತು ಒಳನಾಡು ಜಿಲ್ಲೆಗಳಲ್ಲಿ ಮಳೆಯಾಗಿದೆ.

ಧರ್ಮಸ್ಥಳದಲ್ಲಿ ೭ ಸೆಂಟಿಮೀಟರ್, ಆಗುಂಬೆ ಇಎಂಒ ೫, ಭಾಗಮಂಡಲ, ಬೆಂಗಳೂರು ಎಚ್.ಎ.ಎಲ್ ಎಪಿ ವೀಕ್ಷಣಾಲಯದಲ್ಲಿ ತಲಾ ೪, ಬೆಳ್ತಂಗಡಿ, ಉಡುಪಿ, ಕದ್ರಾ, ಮಂಕಿ, ಸಿದ್ದಾಪುರ, ಕೊಪ್ಪಾದಲ್ಲಿ ತಲಾ ೨ ಸೆಂಟಿಮೀಟರ್ ಮಳೆಯಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**